# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

**ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರ ಕಛೇರಿ ಶಿವಾಜಿನಗರ ಉಪವಿಭಾಗ ಹಲಸೂರು ಕೆರೆರಸ್ತೆ, ಬೆಂಗಳೂರು-42**

---

ಸಂಖ್ಯೆ:ಸ.ಇಂ/ವಾ-92/ವಾರ್ಡ್‌ಸಭೆ/ 21 /2020-21 ದಿನಾಂಕ: 11-11-2021

## ZOOM MEETING

### ವಾರ್ಡ್-92 ರ ವಾರ್ಡ್ ಸಭೆಯ ನಡವಳಿ

ದಿನಾಂಕ: 11-11-2021 ರಂದು ಶಿವಾಜಿನಗರ ಉಪ ವಿಭಾಗ ವಾರ್ಡ್-92-ಶಿವಾಜಿನಗರ ವಾರ್ಡ್ ಕಛೇರಿಯಲ್ಲಿ ಶ್ರೀಮತಿ. ಖಾಜಿ ನಫೀಜಾ ವಾರ್ಡ್-92 ರ ನೋಡಲ್ ಅಧಿಕಾರಿಯವರ ಅಧ್ಯಕ್ಷತೆಯಲ್ಲಿ ನಡೆದ ವಾರ್ಡ್ ಸಮಿತಿ ಸಭಾ ನಡವಳಿ.

**ಹಾಜರಿದ್ದವರು:**

| ಕ್ರಮ ಸಂಖ್ಯೆ | ಸದಸ್ಯರ ಹೆಸರು | ಪದನಾಮ / ಇಲಾಖೆ |
|---|---|---|
| 1 | ಶ್ರೀಮತಿ. ಖಾಜಿ ನಫೀಜಾ | ನೋಡಲ್ ಅಧಿಕಾರಿ ಮತ್ತು ಸಹಾಯಕ ಆಯುಕ್ತರು(ಬಿಬಿಎಂಪಿ) |
| 2 | ಶ್ರೀ. ಶ್ರೀ.ನವೀನ್ | ಆರೋಗ್ಯ ವೈದ್ಯಾಧಿಕಾರಿ, ಶಿವಾಜಿನಗರ ವಲಯ |
| 3 | ಶ್ರೀ. ಜ್ಯೋತಿಲಕ್ಷ್ಮೀ | ಸ.ಕ.ಅ(ಶಿವಾಜಿನಗರ) |
| 4 | ಶ್ರೀ ಪ್ರವೀಣ್.ಎನ್.ಎಂ, | ಸಅ ಹಾಗೂ ಕಾರ್ಯದರ್ಶಿ ಮತ್ತು ಸಂಚಾಲಕರು ವಾರ್ಡ್ ಸಂಖ್ಯೆ:92(ಪ್ರಭಾರ) |
| 5 | ಶ್ರೀ ತ್ಯಾಗರಾಜ್, | ಕಂದಾಯ ಪರಿವೀಕ್ಷಕರು |
| 6 | ಶ್ರೀ ಜಾವೀದ್ | ಸಕಾನಿಅ(ಘ.ತ್ಯಾ.ನಿ) ಶಿವಾಜಿನಗರ ವಿಭಾಗ(ಪ್ರಭಾರ) |
| 7 | ಶ್ರೀ.ರಾಜೇಶ್, | ಸ.ಅ(ಬಿ.ಡಬ್ಲ್ಯೂ.ಎಸ್.ಎಸ್.ಬಿ) |
| 8 | ಶ್ರೀ.ಲಾವಣ್ಯ ಬಾಯ್, | ಕಂದಾಯ ವಸೂಲಿಗಾರರು |
| 9 | ಶ್ರೀ.ವೆಂಕಟೇಶ್, | ಹಿರಿಯ ಆರೋಗ್ಯ ಪರಿವೀಕ್ಷಕರು |

**ಮಾನ್ಯ ನೋಡಲ್ ಅಧಿಕಾರಿರವರ ಸ್ವಾಗತದೊಂದಿಗೆ ಅಧಿಕಾರಿಗಳ / ಹಾಜರಿದ್ದವರ ಪರಸ್ಪರ ಪರಿಚಯದೊಂದಿಗೆ ಸಭೆಯನ್ನು ಪ್ರಾರಂಬಿಸಲಾಯಿತು.**

1) **ಕೋವಿಡ್-19 ಸಾಂಕ್ರಾಮಿಕ ರೋಗದ ಬಗ್ಗೆ:-** ಶಿವಾಜಿನಗರ ಉಪ ವಿಭಾಗದ ವಾರ್ಡ್ ಸಂಖ್ಯೆ:92 ರ ವ್ಯಾಪ್ತಿಯಲ್ಲಿ ಸಾರ್ವಜನಿಕರ ಆರೋಗ್ಯ ಕೇಂದ್ರದ ವೈದ್ಯಾಧಿಕಾರಿಗಳು ಕೋವಿಡ್ ಪರೀಕ್ಷೆಯ ವಿವರಗಳನ್ನು ಸಭೆಗೆ ತಿಳಿಸಿದರು.

- ನೋಡಲ್ ಅಧಿಕಾರಿಗಳೂ ಮಾತಾನಾಡುತ್ತ ಮಳೆಯಿಂದಾಗಿ ಹಳೆಯ ಕಟ್ಟಡಗಳು ಕುಸಿದು ಬೀಳುತ್ತಿದ್ದು, ಇದರ ಬಗ್ಗೆ ಸೂಕ್ತ ಕ್ರಮ ಕೈಗೊಳ್ಳಲು ಹಾಗೂ ಮುಂಜಾಗ್ರತೆಯಿಂದ ಹಳೆ ಕಟ್ಟಡಗಳನ್ನು ಗುರುತಿಸಿ ಅಲ್ಲಿ ವಾಸವಿರುವವರಿಗೆ ಇದರ ಬಗ್ಗೆ ತಿಳುವಳಿಕೆ ನೀಡಿ ಮುಂದಾಗುವ ಅನಾಹುತ ತಪ್ಪಿಸಲು ಸೂಚಿಸಿರುತ್ತಾರೆ.

- ನೋಡಲ್ ಅಧಿಕಾರಿಗಳೂ ಮಾತಾನಾಡುತ್ತ ಮಳೆಯು ಹೆಚ್ಚಾಗಿದ್ದು, ರಸ್ತೆಗಳಲ್ಲಿ ಗುಂಡಿಗಳು ಹೆಚ್ಚಾಗಿರುತ್ತದೆ. ಹಾಗೂ ಅನಧಿಕೃತವಾಗಿ ರಸ್ತೆ ಕತ್ತರಿಸುವುದು ಕಂಡುಬಂದಿದ್ದು, ಇದರ ಬಗ್ಗೆ ಸಂಭಂದಪಟ್ಟ ಇಲಾಖೆರವರಿಗೆ ಪತ್ರದ ಮುಖೇನ ನೋಟಿಸ್ ಜಾರಿ ಮಾಡಲು ಸೂಚಿಸಿರುತ್ತಾರೆ.

- ನೋಡಲ್ ಅಧಿಕಾರಿಗಳೂ ಮಾತಾನಾಡುತ್ತ ರಸ್ತೆಯಲ್ಲಿರುವ ಗುಂಡಿಗಳನ್ನು ಮುಚ್ಚಲು ಶೀಘ್ರವಾಗಿ ಕ್ರಮ ಕೈಗೊಂಡು ಸಾರ್ವಜನಿಕರಿಗೆ ತೊಂದರೆಯಾಗದಂತೆ ಕ್ರಮವಹಿಸಲು ಸೂಚಿಸಿರುತ್ತಾರೆ.

- ಮಾಸ್ಕ್ ದರಿಸದೇ ಸಾರ್ವಜನಿಕವಾಗಿ ಒಡಾಡುವವರಿಗೆ ಕಡ್ಡಾಯವಾಗಿ ನಿಯಮಾವಳಗಳನ್ವಯ ದಂಡ ವಿಧಿಸುವುದು & ಮಾಸ್ಕ್ ಧರಿಸುವಂತೆ ಹಾಗೂ ಸಾಮಾಜಿಕ ಅಂತರ ಕಾಪಾಡಿಕೊಳ್ಳುವಂತೆ ಮನವೊಲಿಸುವ ಕೆಲಸವನ್ನು ನಿರ್ವಹಿಸುವಂತೆ ಸೂಚಿಸಿದರು.

- ನೋಡಲ್ ಅಧಿಕಾರಿಗಳೂ ಮಾತಾನಾಡುತ್ತ ಆರೋಗ್ಯ ವೈಧ್ಯಾಧಿಕಾರಿರವರಿಗೆ ಮೊದಲನೆಯ ವ್ಯಾಕ್ಸಿನೇಷನ್ ಡೋಸ್ ಪಡೆಯದ ಸಾರ್ವಜನಿಕರನ್ನು ಗುರುತಿಸಿ ವ್ಯಾಕ್ಸಿನೇಷನ್ ಬಗ್ಗೆ ಅರಿವು ಮೂಡಿಸಿ ವ್ಯಾಕ್ಸಿನೇಷನ್ ನೀಡಲು ಸೂಚಿಸಿರುತ್ತಾರೆ.

- ನೋಡಲು ಅಧಿಕಾರಿರವರು ಮಳೆಯು ಹೆಚ್ಚಾಗಿದ್ದು, ಇದರ ಬಗ್ಗೆ ರಾತ್ರಿ ನಿಯಂತ್ರಣ ಕೊಠಡಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ಸಿಬ್ಬಂದಿಗಳಗೆ ಮುಂಜಾಗ್ರತೆಯಿಂದ ಅವಶ್ಯವಿರುವ ಎಲ್ಲಾ ವಸ್ತುಗಳೊಂದಿಗೆ ಸಾರ್ವಜನಿಕರಿಗೆ ಯಾವುದೇ ರೀತಿಯಲ್ಲಿ ತೊಂದರೆಯಾಗದಂತೆ ಕ್ರಮವಹಿಸಲು ಸೂಚಿಸಿರುತ್ತಾರೆ.

- ವಾರ್ಡ್‌ನಲ್ಲಿ ವಿವಿಧ ಕಲ್ಯಾಣ ಕಾರ್ಯಕ್ರಮದ ಅಡಿಯಲ್ಲಿ ಅರ್ಹ ಫಲಾನುಭವಿಗಳಿಂದ ಆಹ್ವಾನಿಸಲಾಗಿರುವ ಮನೆ ನಿರ್ಮಾಣಕ್ಕಾಗಿ, ಹೊಲಿಗೆಯಂತ್ರ, ಕಂಪ್ಯೂಟರ್ ಲ್ಯಾಪ್‌ಟಾಪ್ ಹಾಗೂ ಇತರೆ ಸೌಲಭ್ಯಕ್ಕಾಗಿ ಬಂದಿರುವ ಅರ್ಜಿಗಳಲ್ಲಿ ಕೂಡಲೇ ಪರಿಶೀಲಿಸಿ ಪಲಾನುಭವಿಗಳನ್ನು ಆಯ್ಕೆ ಮಾಡಲು, ಸದರಿ ಪಲಾನುಭವಿಗಳಗೆ ತ್ವರಿತವಾಗಿ ಅನುದಾನವನ್ನು ಬಿಡುಗಡೆ ಮಾಡಲು ಸೂಕ್ತ ಕ್ರಮ ವಹಿಸಲು ಸೂಚಿಸಿರುತ್ತಾರೆ. ಸಂಬಂಧಪಟ್ಟ ಅಧಿಕಾರಿಗಳು ಇದರ ಬಗ್ಗೆ ಅವಶ್ಯ ಕ್ರಮ ಕೈಗೊಳ್ಳಲಾಗುತ್ತಿದೆ ಎಂದು ಸಭೆಗೆ ತಿಳಸಿರುತ್ತಾರೆ.

- ವಾರ್ಡ್‌ನಲ್ಲಿ ಬೀದಿ-ಬದಿಯ ವ್ಯಾಪಾರಿಗಳ ಸಾರ್ವಜನಿಕರೊಂದಿಗೆ ವಹಿವಾಟಿಕೆ ಇರುವುದರಿಂದ ಬೀದಿ ಬದಿಯ ವ್ಯಾಪಾರಿಗಳ ವ್ಯಾಕ್ಸನೇಷನ್ ಬಗ್ಗೆ ನೀಗಾವಹಿಸಲು ಹಾಗೂ ವ್ಯಾಕ್ಸನೇಷನ್ ನೀಡಲು ಸೂಚಿಸಿದೆ.

ಅಂತಿಮವಾಗಿ ನೋಡಲ್ ಅಧಿಕಾರಿರವರು ಮಾತನಾಡುತ್ತ ಸಕಾಲದಲ್ಲಿ ಸಾರ್ವಜನಿಕರ ಕುಂದುಕೊರತೆಗಳಗೆ ಸ್ಪಂದಿಸಿ ಪರಿಹರಿಸಲು ಕ್ರಮ ತೆಗೆದುಕೊಂಡು ಎಲ್ಲಾ ಇಲಾಖೆಗಳು ಸಮನ್ವಯತೆಯಿಂದ ಕೆಲಸ ನಿರ್ವಹಿಸಲು ಸೂಚಿಸಿದರು.

ಕಾರ್ಯದರ್ಶಿಯವರು ವಂದನಾರ್ಪಣೆಯೊಂದಿಗೆ ಸಭೆಯನ್ನು ಮುಕ್ತಾಯಗೊಳಸಲಾಯಿತು.

(ಪ್ರವೀಣ್ ಎನ್.ಎಂ)
ಸ.ಅ.& ಕಾರ್ಯದರ್ಶಿ
ವಾರ್ಡ್-92, ಶಿವಾಜಿನಗರ(ಪ್ರಭಾರೆ)